# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 198 |
| ಸದಸ್ಯರ ಹೆಸರು | ಶ್ರೀ ಸಲೀಂ ಅಹಮದ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ), ವಿಧಾನ ಪರಿಷತ್ತಿನ ಸದಸ್ಯರು |
| ಉತ್ತರಿಸಬೇಕಾಗಿದ್ದ ದಿನಾಂಕ | 14.02.2023 |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಾರ್ವಜನಿಕ ಉದ್ದಿಮೆಗಳ ಸಂಖ್ಯೆ ಎಷ್ಟು; | ರಾಜ್ಯ ಸರ್ಕಾರದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಾರ್ವಜನಿಕ ಉದ್ದಿಮೆಗಳ ಒಟ್ಟು ಸಂ:125. |
| ಆ) | ಈ ಉದ್ದಿಮೆಗಳ ಪೈಕಿ ಎಷ್ಟು ಉದ್ದಿಮೆಗಳು ಲಾಭದಾಯಕವಾಗಿ ನಡೆಯುತ್ತಿವೆ ಮತ್ತು ಎಷ್ಟು ನಷ್ಟದಲ್ಲಿ ಕಾರ್ಯನಿರ್ವಹಿಸುತ್ತಿದೆ; (ಸಂಪೂರ್ಣ ವಿವರವನ್ನು ನೀಡುವುದು) | ಈ ಉದ್ದಿಮೆಗಳ ಪೈಕಿ 36 ಉದ್ದಿಮೆಗಳು ಲಾಭದಾಯಕವಾಗಿ ನಡೆಯುತ್ತಿವೆ ಹಾಗೂ 31 ಉದ್ದಿಮೆಗಳು ನಷ್ಟದಲ್ಲಿ ಕಾರ್ಯನಿರ್ವಹಿಸುತ್ತಿದೆ (ವಿವರಗಳನ್ನು ಅನುಬಂಧದಲ್ಲಿ ಲಗತ್ತಿಸಿದೆ). ಉಳಿದ 58 ಉದ್ದಿಮೆಗಳ ಪೈಕಿ ಸಾಮಾಜಿಕ ವಲಯ, ಮೂಲಭೂತ ಸೌಕರ್ಯ ವಲಯಗಳಂತಹ ಮತ್ತು ಸರ್ಕಾರದ ಮೇಲೆ ಅವಲಂಬಿತ ಕಂಪನಿಗಳು ಹಾಗೂ ಸ್ಥಗಿತಗೊಂಡಿರುವ/ಮುಚ್ಚುವ ಹಂತದಲ್ಲಿರುವ ಉದ್ದಿಮೆಗಳನ್ನು ಒಳಗೊಂಡಿವೆ. |
| ಇ) | ನಷ್ಟದಲ್ಲಿರುವ ಉದ್ದಿಮೆಗಳನ್ನು ಪುನಃಶ್ಚೇತನಗೊಳಿಸಲು ಸರ್ಕಾರದ ಕ್ರಮವೇನು; | ನಷ್ಟದಲ್ಲಿರುವ ಉದ್ದಿಮೆಗಳನ್ನು ಪುನಃಶ್ಚೇತನಗೊಳಿಸುವುದು ಅವಶ್ಯಕವೆಂದು ಸರ್ಕಾರ ಪರಿಗಣಿಸಿದ ಸಂದರ್ಭದಲ್ಲಿ ಅಂತಹ ಸಾರ್ವಜನಿಕ ಉದ್ದಿಮೆಗಳಿಗೆ ಅನುದಾನ, ಸಾಲ, ಈಕ್ವಿಟಿ ಹೂಡಿಕೆ ಮಾಡಲಾಗುತ್ತಿದೆ ಹಾಗೂ ಸಾಲ ಪಡೆಯಲು ಸರ್ಕಾರದಿಂದ ಖಾತರಿಗಳ ರೂಪದಲ್ಲಿ ನೆರವನ್ನು ನೀಡಲಾಗುತ್ತಿದೆ. ಇದರ ಜೊತೆಗೆ ಅನುದಾನದ ರೂಪದಲ್ಲಿ ಮತ್ತು ಉದ್ದಿಮೆಗಳ ಆರ್ಥಿಕ ಸಂಕಷ್ಟದ ಸಂದರ್ಭದಲ್ಲಿ ವೇತನ, VRS (ಸ್ವಯಂ ನಿವೃತ್ತಿ ಯೋಜನೆ), ದುಡಿಯುವ ಬಂಡವಾಳ ಇತ್ಯಾದಿಗಳಿಗೂ ಸಹ ಹಣಕಾಸಿನ ನೆರವನ್ನು ಒದಗಿಸಲಾಗುತ್ತಿದೆ. ಉದ್ದಿಮೆಗಳ ಅಧಿಕಾರಿ/ನೌಕರರ ಕಾರ್ಯವೈಖರಿಯನ್ನು ಉತ್ತಮಪಡಿಸುವ ಮೂಲಕ ಉದ್ದಿಮೆಗಳನ್ನು ಅಭಿವೃದ್ಧಿಪಡಿಸಲು ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತದೆ. |

| | | |
|---|---|---|
| ಈ) | ರಾಜ್ಯದಲ್ಲಿರುವ ಉದ್ಯಮಗಳ ಪೈಕಿ ಕೇಂದ್ರ ಸರ್ಕಾರದ ಅಧೀನದಲ್ಲಿರುವ ಉದ್ಯಮಗಳನ್ನು ನಷ್ಟವೆಂದು ಗುರುತಿಸಿ, ಬಂಡವಾಳ ಹಿಂತೆಗೆತ ಪ್ರಕ್ರಿಯೆಯಲ್ಲಿರುವ ಉದ್ಯಮಗಳು ಯಾವುವು; ಈ ಉದ್ಯಮಗಳನ್ನು ರಾಜ್ಯದ ಉದ್ಯೋಗಿಗಳ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಇವುಗಳ ಬಲವರ್ಧನೆ ಮತ್ತು ಪುನಃಶ್ಚೇತನಕ್ಕಾಗಿ ರಾಜ್ಯ ಸರ್ಕಾರವು ರೂಪಿಸಿರುವ ಯೋಜನೆಗಳಾವುವು? (ಸಂಪೂರ್ಣ ವಿವರ ನೀಡುವುದು) | 1. ರಾಜ್ಯದಲ್ಲಿರುವ ಉದ್ಯಮಗಳ ಪೈಕಿ ಕೇಂದ್ರ ಸರ್ಕಾರದ ಅಧೀನದಲ್ಲಿರುವ ಉದ್ಯಮಗಳನ್ನು ನಷ್ಟವೆಂದು ಗುರುತಿಸಿ, ಬಂಡವಾಳ ಹಿಂತೆಗೆತ ಪ್ರಕ್ರಿಯೆಯಲ್ಲಿರುವ ಉದ್ಯಮಗಳ ಬಗ್ಗೆ ಯಾವುದೇ ಅಧಿಕೃತ ಮಾಹಿತಿಯನ್ನು ಕೇಂದ್ರ ಸರ್ಕಾರವು ರಾಜ್ಯ ಸರ್ಕಾರಕ್ಕೆ ನೀಡಿರುವುದಿಲ್ಲ. ಆದುದರಿಂದ, ಈ ಬಗ್ಗೆ ರಾಜ್ಯ ಸರ್ಕಾರದ ಬಳಿ ಯಾವುದೇ ಅಧಿಕೃತ ಮಾಹಿತಿ ಲಭ್ಯವಿರುವುದಿಲ್ಲ.<br><br>2. ಇಂತಹ ಉದ್ದಿಮೆಗಳ ಬಲವರ್ಧನೆ ಮತ್ತು ಪುನಃಶ್ಚೇತನಕ್ಕಾಗಿ ಯೋಜನೆಗಳನ್ನು ಕೇಂದ್ರ ಸರ್ಕಾರವು ರೂಪಿಸಬೇಕಾಗುತ್ತದೆ. |

**ಆಇ 18 ಐಎನ್‌ವಿ 2023**

(ಸಿದ್ದರಾಮಯ್ಯ)
ಮುಖ್ಯಮಂತ್ರಿ.

## ಅನುಬಂಧ

## ಲಾಭದಲ್ಲಿರುವ ಸಾರ್ವಜನಿಕ ಉದ್ದಿಮೆಗಳು

| ಕ್ರಮ ಸಂಖ್ಯೆ | ಸಾರ್ವಜನಿಕ ಉದ್ದಿಮೆಯ ಹೆಸರು |
|---|---|
| 1 | ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೊರೇಷನ್ ಲಿಮಿಟೆಡ್ |
| 2 | ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ |
| 3 | ಕರ್ನಾಟಕ ವಿದ್ಯುತ್ ನಿಗಮ ನಿಯಮಿತ |
| 4 | ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ |
| 5 | ಕರ್ನಾಟಕ ಗ್ರಾಮೀಣ ಮೂಲಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತ |
| 6 | ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತ |
| 7 | ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತ |
| 8 | ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ |
| 9 | ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲ ಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತ |
| 10 | ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ |
| 11 | ಮೈಸೂರು ಸೇಲ್ಸ್ ಇಂಟರ್ ನ್ಯಾಷನಲ್ ಲಿಮಿಟೆಡ್ |
| 12 | ಕರ್ನಾಟಕ ರಾಜ್ಯ ಪಾನೀಯ ನಿಗಮ ನಿಯಮಿತ |
| 13 | ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತ |
| 14 | ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ |
| 15 | ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತ |
| 16 | ಸಿಬಿಐಸಿ ತುಮಕೂರು ಇಂಡಸ್ಟ್ರೀಯಲ್ ಟೌನ್‌ಶೀಪ್ ಲಿ., |
| 17 | ಕರ್ನಾಟಕ ಸ್ಟೇಟ್ ಮಾರ್ಕೆಟಿಂಗ್ ಕಮ್ಯುನಿಕೇಷನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್ |
| 18 | ಕರ್ನಾಟಕ ರಾಜ್ಯ ಪೊಲೀಸ್ ವಸತಿ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತ |
| 19 | ಕರ್ನಾಟಕ ವಿದ್ಯುತ್ ಕಾರ್ಖಾನೆ ನಿಯಮಿತ |
| 20 | ಕರ್ನಾಟಕ  ರಾಜ್ಯ ಬೀಜ ನಿಗಮ ನಿಯಮಿತ |
| 21 | ಮೈಸೂರು ಪೆಯಿಂಟ್ಸ್ & ವಾರ್ನಿಷ್ ಲಿಮಿಟೆಡ್ |
| 22 | ದಿ ಮೈಸೂರು ಎಲೆಕ್ಟ್ರಿಕಲ್ ಇಂಡಸ್ಟ್ರೀಸ್ ಲಿಮಿಟೆಡ್ |
| 23 | ಮಂಗಳೂರು ವಿದ್ಯುಚ್ಛಕ್ತಿ ಸರಬರಾಜು ಕಂಪನಿ ನಿಯಮಿತ |
| 24 | ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ  ನಿಗಮ ನಿಯಮಿತ |
| 25 | ರೈಲು ಮೂಲ ಸೌಲಭ್ಯ ಅಭಿವೃದ್ಧಿ ಕಂಪನಿ (ಕರ್ನಾಟಕ) ಲಿ., |

| | |
|---|---|
| 26 | ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತ |
| 27 | ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ |
| 28 | ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮ ನಿಯಮಿತ |
| 29 | ಅರಣ್ಯ ವಸತಿ ಮತ್ತು ವಿಹಾರಧಾಮಗಳ ಸಂಸ್ಥೆ |
| 30 | ಕರ್ನಾಟಕ ರಾಜ್ಯ ದ್ವಿದಳ ಧಾನ್ಯಗಳ ಅಭಿವೃದ್ಧಿ ಮಂಡಳಿ ನಿಯಮಿತ |
| 31 | ಕರ್ನಾಟಕ ರಾಜ್ಯ ಉಗ್ರಾಣ ನಿಗಮ |
| 32 | ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರಾಟ ನಿಗಮ ನಿಯಮಿತ |
| 33 | ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ |
| 34 | ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ ನಿಯಮಿತ |
| 35 | ಕರ್ನಾಟಕ ಗೇರು ಅಭಿವೃದ್ಧಿ ನಿಗಮ ನಿಯಮಿತ |
| 36 | ಕರ್ನಾಟಕ ಪ್ರವಾಸೋದ್ಯಮ ಮೂಲ ಸೌಕರ್ಯ ನಿಯಮಿತ |

**ನಷ್ಟದಲ್ಲಿರುವ ಸಾರ್ವಜನಿಕ ಉದ್ದಿಮೆಗಳು**

| ಕ್ರಮ ಸಂಖ್ಯೆ | ಸಾರ್ವಜನಿಕ ಉದ್ದಿಮೆಯ ಹೆಸರು |
|---|---|
| 1 | ಕಾವೇರಿ ನೀರಾವರಿ ನಿಗಮ ನಿಯಮಿತ |
| 2 | ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ |
| 3 | ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ |
| 4 | ಮೈಸೂರು ಕಾಗದ ಕಾರ್ಖಾನೆ ನಿಯಮಿತ |
| 5 | ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ |
| 6 | ರಾಯಚೂರು ಪವರ್ ಕಾರ್ಪೋರೇಷನ್ ಲಿ., |
| 7 | ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ |
| 8 | ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ |
| 9 | ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ |
| 10 | ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ |
| 11 | ಕರ್ನಾಟಕ ರಾಜ್ಯ ಜವಳಿ ಮೂಲ ಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತ |
| 12 | ಆಹಾರ ಕರ್ನಾಟಕ ನಿಯಮಿತ |
| 13 | ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ನಿಯಮಿತ |
| 14 | ಶ್ರೀ ಕಂಠೀರವ ಸ್ಟುಡಿಯೋ ನಿಯಮಿತ |

| | |
|---|---|
| 15 | ಪವರ್ ಕಂಪನಿ ಆಫ್ ಕರ್ನಾಟಕ ಲಿ., |
| 16 | ಬೆಂಗಳೂರು ಸಂಯೋಜಿತ ರೈಲು ಮೂಲ ಸೌಲಭ್ಯ ಅಭಿವೃದ್ಧಿ ಉದ್ಯಮ ನಿಯಮಿತ |
| 17 | ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ |
| 18 | ಅಂತರಾಷ್ಟ್ರೀಯ ಪುಷ್ಪ ಹರಾಜು ಬೆಂಗಳೂರು ನಿಯಮಿತ |
| 19 | ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ ನಿಯಮಿತ |
| 20 | ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ |
| 21 | ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ |
| 22 | ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ(ಲಿಡ್ಕರ್) |
| 23 | ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ |
| 24 | ಮೈಸೂರು ಸಕ್ಕರೆ ಕಂಪನಿ ನಿಯಮಿತ |
| 25 | ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತ |
| 26 | ಹುಬ್ಬಳ್ಳಿ ಧಾರವಾಡ ಬಿಆರ್‌ಟಿಎಸ್ ಕಂಪನಿ ಲಿ., |
| 27 | ಕರ್ನಾಟಕ ಕಾಂಪೋಸ್ಟ್ ಅಭಿವೃದ್ಧಿ ನಿಗಮ ನಿಯಮಿತ |
| 28 | ಕರ್ನಾಟಕ ರಾಜ್ಯ ರಸ್ತೆ ಅಭಿವೃದ್ಧಿ ನಿಗಮ |
| 29 | ಕರ್ನಾಟಕ ಮೀನುಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ |
| 30 | ಎನ್ ಜಿಇಎಫ್ (ಹುಬ್ಬಳ್ಳಿ ) ನಿಯಮಿತ |
| 31 | ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತ |